**December 14, 2017**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

ಆಕಾಶವಾಣಿ–ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಸವಣ್ಣನವರ ಕನಸುಗಳ ಸಾಕಾರಕ್ಕೆ ಸರ್ಕಾರದ ಪ್ರಾಮಾಣಿಕ ಪ್ರಯತ್ನ– ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ.
- ಪ್ರಸಕ್ತ ಹಿಂಗಾರು ಹಂಗಾಮಿನಲ್ಲಿ 32 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ– ಕೃಷಿ ಸಚಿವ ಕೃಷ್ಣ ಬೈರೇಗೌಡ ಮಾಹಿತಿ.
- ಸತ್ಯಾಂಶ ತಿಳಿಯಲು ಪರೇಶ್ ಮೇಸ್ತ ಸಾವಿನ ಪ್ರಕರಣದ ತನಿಖೆ ಸಿಬಿಐಗೆ– ಗೃಹ ಸಚಿವ ರಾಮಲಿಂಗಾರೆಡ್ಡಿ ಸ್ಪಷ್ಟನೆ.
- ನಾಳೆಯಿಂದ ಸಂಸತ್ತಿನ ಚಳಿಗಾಲದ ಅಧಿವೇಶನ– ಇಂದು ಸರ್ವಪಕ್ಷ ಸಭೆ

*****

ಬಸವಣ್ಣನವರ ಸಾಮಾಜಿಕ ನ್ಯಾಯದ ತತ್ವ ಮತ್ತು ಸಿದ್ಧಾಂತಕ್ಕೆ ಮಾರು ಹೋಗಿ ಅನುಯಾಯಿ ಆಗಿದ್ದೇನೆ. ಯಾವುದೇ ರಾಜಕೀಯ ಕಾರಣಕ್ಕಲ್ಲ. ಅವರ ಕನಸುಗಳ ಸಾಕಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಬೀದರ ಜಿಲ್ಲೆ ಬಸವಕಲ್ಯಾಣದಿಂದ ಅಭಿವೃದ್ಧಿ ಪರ್ವ ಯಾತ್ರೆ ಕಾರ್ಯಕ್ರಮ ಆರಂಭಿಸಿ, 264 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇಡೀ ಜಗತ್ತಿನಲ್ಲಿ ಸಾಮಾಜಿಕ ನ್ಯಾಯದ ಬೀಜವನ್ನು ಬಿತ್ತಿದ ಮೊದಲ ಮಹಾಪುರುಷ ಬಸವಣ್ಣನವರು. ಜಾತಿರಹಿತ, ವರ್ಗರಹಿತ ಸಮ ಸಮಾಜದ ನಿರ್ಮಾಣ, ಸಾಮಾಜಿಕ ನ್ಯಾಯದ ಕಲ್ಪನೆ ನೀಡಿದವರು. ಅವರ ಆಶಯಗಳನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿ, ಅನುಷ್ಠಾನಗೊಳಿಸುತ್ತಿದೆ ಎಂದರು.

ಅಕ್ಷರ ಧಾಮ ಮಾದರಿಯಲ್ಲಿ ಕೂಡಲ ಸಂಗಮ ಅಭಿವೃದ್ಧಿಗೆ 250 ಕೋಟಿ ರೂಪಾಯಿ ವೆಚ್ಚ ಮಾಡಲಾಗುತ್ತಿದೆ. ಮುಂದಿನ ಬಜೆಟ್‌ನಲ್ಲಿ ಇದಕ್ಕೆ ಅನುದಾನ ನಿಗದಿ ಮಾಡಲಾಗುವುದು ಎಂದು ಸಿದ್ದರಾಮಯ್ಯ ಹೇಳಿದರು.

*****

ಸಮಾಜದಲ್ಲಿ ಶಾಂತಿ ಕದಡುವ ಪ್ರಯತ್ನಕ್ಕೆ ಬಿಜೆಪಿ ಕೈ ಹಾಕಿದೆ. ಧರ್ಮ ಧರ್ಮಗಳ ನಡುವೆ ಸಂಘರ್ಷ ಸೃಷ್ಟಿಸಿ, ರಾಜಕೀಯ ಲಾಭ ಪಡೆಯಲು ಪ್ರಯತ್ನಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಬೀದರನಲ್ಲಿ ನಿನ್ನೆ ಸಮಾರಂಭವೊಂದರಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳಿಂದ ಬಿಜೆಪಿ ಹತಾಶಗೊಂಡಿದೆ. ಅಭಿವೃದ್ಧಿ ಕಾರ್ಯಕ್ರಮಗಳ ಚರ್ಚೆಗೆ ಬರಲು ಅವರಿಗೆ ಧೈರ್ಯವಿಲ್ಲ. ಮುಂದಿನ ಚುನಾವಣೆಯಲ್ಲಿ ಹೇಗಾದರೂ ಅಧಿಕಾರಕ್ಕೆ ಬರಬೇಕು ಎನ್ನುವ ಉದ್ದೇಶಕ್ಕೆ ಭಾವನಾತ್ಮಕ ವಿಷಯಗಳನ್ನು ಮುಂದಿಟ್ಟುಕೊಂಡು ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ ಪ್ರಯತ್ನಕ್ಕೆ ಕೈ ಹಾಕಿದೆ ಎಂದು ಹೇಳಿದರು

*****

ಪ್ರಸಕ್ತ ಸಾಲಿನಲ್ಲಿ ರಾಜ್ಯಾದ್ಯಂತ ಉತ್ತಮ ಮಳೆಯಾಗಿರುವ ಹಿನ್ನೆಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ 32 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಲಾಗಿದೆ ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಬೆಂಗಳೂರಿನ ವಿಕಾಸಸೌಧದಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ 30.85 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ. ಹಿಂಗಾರು ಹಂಗಾಮಿನಲ್ಲಿ 26 ರಿಂದ 27 ಮಿಲಿಯನ್ ಟನ್ ಉತ್ಪಾದನೆ ಗುರಿ ಹೊಂದಲಾಗಿದ್ದು, ನೂರಕ್ಕೆ ನೂರರಷ್ಟು ಸಾಧನೆಯ ನಿರೀಕ್ಷೆಯಿದೆ, ತೇವಾಂಶ ಚೆನ್ನಾಗಿರುವ ಹಿನ್ನೆಲೆಯಲ್ಲಿ ಉತ್ತಮ ಇಳುವರಿ ನಿರೀಕ್ಷಿಸಲಾಗಿದೆ ಎಂದರು.

ಈಗಾಗಲೇ ಹೆಸರು, ಉದ್ದು ಮತ್ತು ಶೇಂಗಾ ಖರೀದಿ ನಡೆಯುತ್ತಿದ್ದು, ತೊಗರಿ ಖರೀದಿ ಸಧ್ಯದಲ್ಲೇ ಪ್ರಾರಂಭವಾಗಲಿದೆ. ಈ ಕುರಿತು ಕೇಂದ್ರ ಸರ್ಕಾರದೊಂದಿಗೆ ಪತ್ರ ವ್ಯವಹಾರ ನಡೆಸಲಾಗುತ್ತಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ರಾಜ್ಯದ 78 ಲಕ್ಷ 32 ಸಾವಿರ ರೈತ ಕುಟುಂಬಗಳಿಗೆ ಮಣ್ಣು ಆರೋಗ್ಯ ಚೀಟಿ ವಿತರಿಸಲಾಗಿದ್ದು, ಬಗ್ಗೆ ಮಾಹಿತಿ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

*****

ರಾಜ್ಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಪರೇಶ್ ಮೇಸ್ತ ಸಾವಿನ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಲಾಗಿದೆ ಎಂದು ಗೃಹ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಸಾವಿನ ತನಿಖೆಯನ್ನು ಸಿಬಿಐ ಅಥವಾ ಎನ್‌ಐಎ ಗೆ ವಹಿಸುವಂತೆ ಬಿಜೆಪಿ ನಾಯಕರು ಆಗ್ರಹಿಸಿದ್ದರು. ಪ್ರಕರಣದ ಸತ್ಯಾಂಶ ಹೊರಬರಲಿ ಎಂಬ ಕಾರಣಕ್ಕೆ ಸಿಬಿಐ ತನಿಖೆಗೆ ವಹಿಸಲಾಗುತ್ತದೆಯೇ ವಿನಃ ಬಿಜೆಪಿ ನಾಯಕರ ಒತ್ತಾಯಕ್ಕೆ ಮಣಿದು ಅಲ್ಲ ಎಂದು ಸ್ಪಷ್ಟಪಡಿಸಿದರು.

ಪರೇಶ್ ಮೇಸ್ತ ಸಾವು ಖಂಡಿಸಿ ಉತ್ತರ ಕನ್ನಡದಲ್ಲಿ ಭಾರೀ ಪ್ರತಿಭಟನೆಗಳು ನಡೆದಿದ್ದವು. ಕುಮಟಾ, ಶಿರಸಿಯಲ್ಲಿ ಹಿಂದೂಪರ ಸಂಘಟನೆಗಳ ಪ್ರತಿಭಟನೆ ವೇಳೆ ಹಿಂಸಾಚಾರ ನಡೆದಿತ್ತು.

*****

ಕೃಷ್ಣಾ ಮೇಲ್ದಂಡೆ ಮೂರನೇ ಹಂತದ ಭೂ ಸ್ವಾದೀನ ಹಾಗೂ ಪುನರ್ವಸತಿಗಾಗಿ ರೈತರಿಂದ ಜಮೀನು ಪಡೆಯಲು ಹಾಗೂ ಏಕರೂಪದ ದರ ನಿಗದಿಪಡಿಸಲು ಸರಕಾರದ ಮಟ್ಟದಲ್ಲಿ ಪ್ರಕ್ರಿಯೆ ಆರಂಭಗೊಂಡಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಎಚ್.ಕೆ.ಪಾಟೀಲ ಹೇಳಿದ್ದಾರೆ.

ಸಿಂಧನೂರನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರ ಅಧ್ಯಕ್ಷತೆಯಲ್ಲಿ ಈ ಸಂಬಂಧ ಸಮಿತಿಯೊಂದನ್ನು ರಚಿಸಲಾಗಿದ್ದು ಈಗಾಗಲೇ ಕೂಡಲಸಂಗಮ ಹಾಗೂ ಕೊಪ್ಪಳದಲ್ಲಿ ಸಭೆಗಳನ್ನು ನಡೆಸಿ ರೈತರೊಂದಿಗೆ ಚರ್ಚಿಸಲಾಗಿದೆ. ಈ ಕುರಿತು ಅಧ್ಯಯನ ನಡೆಸಿ ಸರಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದರು.

ರಾಜ್ಯದ ಗ್ರಾಮೀಣ ಭಾಗದಲ್ಲಿ ಶುದ್ಧ ಕುಡಿಯುವ ನೀರಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ 10,100 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಾಣ ಮಾಡಲಾಗಿದೆ. ಬರುವ ಮಾರ್ಚ 30 ರೊಳಗೆ ಇನ್ನು 3 ಸಾವಿರ ಘಟಕಗಳನ್ನು ಆರಂಭಿಸುವ ಗುರಿ ಹೊಂದಲಾಗಿದೆ ಎಂದು ಅವರು ಹೇಳಿದರು.

*****

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ನಿಗದಿ ಮಾಡಿದ 128 ಸಾವಿರ ಕೋಟಿ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ಎನ್ನುವ ಕುರಿತು ಸರ್ಕಾರ ಶ್ವೇತಪತ್ರ ಹೊರಡಿಸಬೇಕು ಎಂದು ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಬೆಂಗಳೂರಿನ ಅರಮನೆ ಮೈದಾನದಲ್ಲಿ ನಿನ್ನೆ ನಡೆದ 'ದಲಿತರ ನಡಿಗೆ ಕುಮಾರಣ್ಣನ ಕಡೆಗೆ' ಸಮಾವೇಶದಲ್ಲಿ ಮಾತನಾಡಿದ ಅವರು, ಚುನಾವಣೆ ದೃಷ್ಟಿಯಲ್ಲಿ ಇಟ್ಟುಕೊಂಡು ಕಾಂಗ್ರೆಸ್ ಪಕ್ಷದ ಪ್ರಚಾರಕ್ಕೆ ಸಾರ್ವಜನಿಕರ ಹಣ ಲೂಟಿ ಮಾಡಲಾಗುತ್ತಿದೆ. ಸರ್ಕಾರದ ಸಾಧನೆಗಳ ಪ್ರಚಾರಕ್ಕೆ ವಿದೇಶಿ ಕಂಪೆನಿಯೊಂದಕ್ಕೆ 600 ಕೋಟಿ ಮೊತ್ತದ ಗುತ್ತಿಗೆ ನೀಡಲಾಗಿದೆ ಎಂದು ಆರೋಪಿಸಿದರು.

ಬಿಜೆಪಿಯ ನಾಯಕರು ಹಿಂದುತ್ವದ ಹೆಸರಿನಲ್ಲಿ ಅಧಿಕಾರಕ್ಕೆ ಬರಲು ಹೊರಟಿದ್ದಾರೆ. ಭಾವನಾತ್ಮಕ ವಿಷಯಗಳ ಮೂಲಕ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಪ್ರಯತ್ನ ಮಾಡುತ್ತಿದೆ. ಅಮಾಯಕರಿಗೆ ರಕ್ಷಣೆ ನೀಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಕುಮಾರಸ್ವಾಮಿ ಟೀಕಿಸಿದರು.

*****

ಸಂಸತ್ತಿನ ಚಳಿಗಾಲದ ಅಧಿವೇಶನ ನಾಳೆಯಿಂದ ಆರಂಭವಾಗಲಿದ್ದು, ಈ ಹಿನ್ನೆಲೆಯಲ್ಲಿ ಲೋಕಸಭಾ ಸ್ಪೀಕರ್ ಸುಮಿತ್ರಾ ಮಹಾಜನ್ ಇಂದು ಸರ್ವಪಕ್ಷ ಸಭೆ ಕರೆದಿದ್ದಾರೆ.

ಆಡಳಿತಾರೂಢ ಹಾಗೂ ಪ್ರತಿಪಕ್ಷಗಳ ಮತ್ತು ಇನ್ನಿತರ ಎಲ್ಲ ಪಕ್ಷಗಳ ನಾಯಕರು ಸಭೆಯಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಸುಮಿತ್ರಾ ಮಹಾಜನ್ ಅವರು ಏರ್ಪಡಿಸಿರುವ ಔತಣ ಕೂಟದಲ್ಲೂ ಪಾಲ್ಗೊಳ್ಳಲಿದ್ದಾರೆ. ಒಟ್ಟು 14 ದಿನ ಚಳಿಗಾಲದ ಅಧಿವೇಶನ ನಡೆಯಲಿದೆ.

ಈ ನಡುವೆ ಕೇಂದ್ರ ಸರ್ಕಾರ ಸಹ ನಾಳೆಯೇ ಸರ್ವಪಕ್ಷ ಸಭೆ ಕರೆದಿದೆ. ಮುಂದಿನ ತಿಂಗಳ ಜನವರಿ 5ರವರೆಗೆ ಅಧಿವೇಶನ ನಡೆಯಲಿದೆ.

*****

ಪ್ರಧಾನಮಂತ್ರಿ ನರೇಂದ್ರ ಮೋದಿ ಐ.ಎನ್.ಎಸ್. ಕಲ್ವಾರಿ ಜಲಾಂತರ್ಗಾಮಿಯನ್ನು ಇಂದು ಮುಂಬೈನ ನೌಕಾ ಹಡಗುಕಟ್ಟೆಯಲ್ಲಿ ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ.

ಐ.ಎನ್.ಎಸ್. ಕಲ್ವಾರಿ ಡೀಸೆಲ್ ಎಲೆಕ್ಟ್ರಿಕ್ ದಾಳಿಯ ಜಲಾಂತರ್ಗಾಮಿಯಾಗಿದ್ದು, ಇದನ್ನು ಮಜಗಾಂ ಡಾಕ್ ಶಿಪ್ ಬಿಲ್ಡರ್ಸ್ ಲಿಮಿಟೆಡ್ ಭಾರತೀಯ ನೌಕಾಪಡೆಗಾಗಿಯೇ ನಿರ್ಮಾಣ ಮಾಡಿದೆ.

ಇಂಥ ಆರು ಜಲಾಂತರ್ಗಾಮಿಗಳ ಪೈಕಿ ಭಾರತೀಯ ನೌಕಾಪಡೆಗೆ ಸೇರ್ಪಡೆಯಾಗುತ್ತಿರುವ ಮೊದಲನೆಯ ಜಲಾಂತರ್ಗಾಮಿ ನೌಕೆಯಾಗಿದ್ದು, ಇದು ಮೇಕ್ ಇನ್ ಇಂಡಿಯಾ ಉಪಕ್ರಮದ ಗಣನೀಯ ಯಶಸ್ಸನ್ನು ಪ್ರತಿನಿಧಿಸುತ್ತದೆ. ಈ ಯೋಜನೆಯನ್ನು ಫ್ರೆಂಚ್ ಸಹಯೋಗದಲ್ಲಿ ಕೈಗೊಳ್ಳಲಾಗಿತ್ತು.

*****

ಯಶಸ್ವಿಯಾಗಿ ಮೂರು ವರ್ಷ ಆಡಳಿತ ನಡೆಸಿರುವ, ದೇಶವನ್ನು ಪ್ರಗತಿ ಪಥದಲ್ಲಿ ಮುನ್ನಡೆಸುತ್ತಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಆಡಳಿತ ಅವಧಿಯಲ್ಲಿ ಕೈಗೊಂಡ, ಜಾರಿಗೆ ತಂದಿರುವ ಪ್ರಮುಖ ಕಾರ್ಯಕ್ರಮಗಳ ಬಗ್ಗೆ ಜನಾಭಿಪ್ರಾಯ ತಿಳಿಸುವ ವಿಶೇಷ ಮಾಲಿಕೆಯಲ್ಲಿ ಇಂದು ಪದ್ಮಶ್ರೀ ಪುರಸ್ಕೃತ, ಖ್ಯಾತ ನೇತ್ರ ತಜ್ಞ ಡಾ.ಎಂ.ಎಂ.ಜೋಶಿ ನೋಟು ಅಮಾನ್ಯೀಕರಣ ಮತ್ತು ಸರಕು ಹಾಗೂ ಸೇವಾ ತೆರಿಗೆ ಕುರಿತು ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದು ಹೀಗೆ..

ಧ್ವನಿ– ಡಾ.ಎಂ.ಎಂ.ಜೋಶಿ–1.10 ಸೆಕೆಂಡ್ಸ್

*****

ಈಗ ಚುಟುಕು ಸುದ್ದಿ..

ದೊಡ್ಡಬಳ್ಳಾಪುರದ ಬಳಕೆದಾರರ ಹಿತರಕ್ಷಣಾ ಸಂಘದ ನೇತೃತ್ವದಲ್ಲಿ ನಡೆದ ಗಡಿನಾಡಿನಲ್ಲಿ ಕನ್ನಡ ಜಾಗೃತಿ ಸೈಕಲ್ ಜಾಥಾಗೆ ನಗರಸಭೆ ಅಧ್ಯಕ್ಷ ಟಿ.ಎನ್.ಪ್ರಭುದೇವ್ ನಿನ್ನೆ ಚಾಲನೆ ನೀಡಿದರು. ಇದೇ 16 ರವರೆಗೆ ನಡೆಯಲಿರುವ ಜಾಥಾ ದೊಡ್ಡಬಳ್ಳಾಪುರದಿಂದ ಮಧುಗಿರಿ, ವೈ.ಎನ್ ಹೊಸಕೋಟೆ, ಪಾವಗಡ ಹಾಗೂ ಆಂಧ್ರ ಪ್ರದೇಶದ ನಾಲ್ಕು ತಾಲೂಕುಗಳಲ್ಲಿ ಸಂಚರಿಸಲಿದೆ.

*****

ರಾಜ್ಯದಲ್ಲಿ ಕಳೆದ ನಾಲ್ಕುವರೆ ವರ್ಷಗಳಲ್ಲಿ ನಡೆದಿರುವ ಹಿಂದೂ ಸಂಘಟನೆಗಳ ಕಾರ್ಯಕರ್ತರ ಹತ್ಯೆ ಪ್ರಕರಣಗಳ ತನಿಖೆಯನ್ನು ರಾಷ್ಟ್ರೀಯ ತನಿಖಾ ದಳಕ್ಕೆ ವಹಿಸಬೇಕೆಂದು ಆಗ್ರಹಿಸಿ ದಾವಣಗೆರೆಯಲ್ಲಿ ನಿನ್ನೆ ಹಿಂದೂ ಜಾಗರಣಾ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ಉಪ ವಿಭಾಗಾಧಿಕಾರಿಗಳ ಮೂಲಕ ಕೇಂದ್ರ ಗೃಹ ಸಚಿವರಿಗೆ ಮನವಿ ಸಲ್ಲಿಸಿದರು.

*****

ಆದಾಯ ಮೀರಿದ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಳಗಾವಿ ಎಸಿಬಿ ಪೊಲೀಸರು ಜಿಲ್ಲೆಯಾದ್ಯಂತ ನಿನ್ನೆ 6 ಸ್ಥಳಗಳಲ್ಲಿ ದಾಳಿ ನಡೆಸಿದ್ದಾರೆ. ಕಿತ್ತೂರು ಎಇಇ ಸುರೇಶ ಭೀಮಾನಾಯ್ಕ್ ಮನೆ ಸೇರಿದಂತೆ 6 ಸ್ಥಳಗಳಲ್ಲಿ ದಾಳಿ ನಡೆಸಿರುವ ಎಸಿಬಿ ಪೊಲೀಸರು ಅಗತ್ಯ ಮಾಹಿತಿ ಸಂಗ್ರಹ ಮಾಡಿದ್ದಾರೆ.

***END***